ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಅವಿಶ್ವಾಸ ನಿರ್ಣಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 25/9/2020

# ದಿಢೀರ್ ಅವಿಶ್ವಾಸ

## ಅಚ್ಚರಿಯ ಬೆಳವಣಿಗೆಯಲ್ಲಿ ಕಾಂಗ್ರೆಸ್‌ನಿಂದ ಅವಿಶ್ವಾಸ ನಿರ್ಣಯ

## ರಾಜ್ಯ ಸರ್ಕಾರ ಸುಭದ್ರ ಎಂದ ಬಿಜೆಪಿ । ಜೆಡಿಎಸ್ ನಡೆ ಕುತೂಹಲ



ಬೆಂಗಳೂರು: ಶಾಂತವಾಗಿದ್ದ ರಾಜ್ಯ ರಾಜಕೀಯದಲ್ಲಿ ದಿಢೀರನೇ 'ಅವಿಶ್ವಾಸ'ದ ಗಾಳಿ ಬೀಸಿದೆ. ರಾಜ್ಯದ ಬಿ.ಎಸ್.ಯಡಿಯೂರಪ್ಪ ಅವರ ನೇತೃತ್ವದ ಸರ್ಕಾರ 'ವಿಶ್ವಾಸ' ಕಳೆದುಕೊಂಡಿದೆ ಎಂದು ಆರೋಪಿಸಿರುವ ಪ್ರತಿಪಕ್ಷ ಕಾಂಗ್ರೆಸ್, ವಿಧಾನಸಭೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿದೆ.

ಕೊರೊನಾ ಸೋಂಕು ಹೆಚ್ಚುತ್ತಿರುವ ಮಧ್ಯೆ ಹಾಗೂ ಮುಂಗಾರು ಅಧಿವೇಶನ ಅಂತ್ಯವಾಗಲು ಇನ್ನೆರಡು ದಿನ ಬಾಕಿ ಇರುವಂತೆ ಈ ವಿದ್ಯಮಾನ ನಡೆದಿರುವುದು ಕುತೂಹಲ ಮೂಡಿಸಿದೆ.

ವಿಶೇಷವೆಂದರೆ, ಕಾಂಗ್ರೆಸ್‌ನ ಅವಿಶ್ವಾಸ ನಿರ್ಣಯ ಕೋರಿಕೆಯನ್ನು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅಂಗೀಕರಿಸಿದ್ದು, ಅಧಿಕೃತ ಚರ್ಚೆಗೆ ಅವಕಾಶ ನೀಡುವುದಾಗಿಯೂ ಹೇಳಿದ್ದಾರೆ.

**ಶಾಸಕಾಂಗ ಸಭೆಯಲ್ಲಿ ನಿರ್ಧಾರ :** ಗುರುವಾರ ಕಲಾಪ ಆರಂಭವಾಗುವ ಮುನ್ನ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಅವಿಶ್ವಾಸ ನಿರ್ಣಯದ ಬಗ್ಗೆ ನಿರ್ಧರಿಸಲಾಗಿದೆ. ಕಲಾಪ ಆರಂಭಗೊಂಡ ನಂತರ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಅವಿಶ್ವಾಸ ಮಂಡನೆಗೆ ಅವಕಾಶ ಕಲ್ಪಿಸುವಂತೆ ಮನವಿ ಮಾಡಿದರು. ಈ ಮನವಿಗೆ ಸ್ಪಂದಿಸಿದ ಸ್ಪೀಕರ್, ಅವಿಶ್ವಾಸ ನಿರ್ಣಯದ ಪರವಾಗಿರುವವರು ಎದ್ದು ನಿಂತು ಬೆಂಬಲ ಸೂಚಿಸುವಂತೆ ಕೋರಿದರು. ಆಗ ಕಾಂಗ್ರೆಸ್ ಸದಸ್ಯರೆಲ್ಲರೂ ಎದ್ದು ನಿಲ್ಲುವ ಮೂಲಕ ಅವಿಶ್ವಾಸ ನಿರ್ಣಯಕ್ಕೆ ಬೆಂಬಲ ಸೂಚಿಸಿದರು. ಒಂದು ನಿರ್ಣಯದ ಪರವಾಗಿ 23 ಕ್ಕೂ ಹೆಚ್ಚು ಸದಸ್ಯರು ಬೆಂಬಲ ಸೂಚಿಸಿದರೆ, ಆ ವಿಷಯದ ಮೇಲೆ ಚರ್ಚೆಗೆ ಸದನದ ಒಪ್ಪಿಗೆ ಇದೆ ಎಂದು ಭಾವಿಸಿ, ಸರ್ಕಾರದ ವಿರುದ್ಧ ಮಂಡಿಸಿರುವ ಅವಿಶ್ವಾಸ ನಿರ್ಣಯದ ಮೇಲೆ ಚರ್ಚೆಗೆ ಅವಕಾಶ ನೀಡುವುದಾಗಿ ಸ್ಪೀಕರ್ ರೂಲಿಂಗ್ ನೀಡಿದರು.

▶ 7ನೇ ಪುಟಕ್ಕೆ

### ನಮಗೆ ಮಾಹಿತಿಯೇ ಇಲ್ಲ



ಕಾಂಗ್ರೆಸ್ ಪಕ್ಷದವರು ಅವಿಶ್ವಾಸ ನಿರ್ಣಯ ಮಂಡನೆಗೆ ಮುಂಚೆ ನಮ್ಮ ಜತೆ ಮಾತನಾಡಿಲ್ಲ. ಯಾವ ವಿಷಯ ಚರ್ಚೆ ಮಾಡುತ್ತಾರೆ ಎಂಬುದು ಗೊತ್ತಿಲ್ಲ. ಅವರ ಉದ್ದೇಶ ಏನೂ ಅರ್ಥವಾಗುತ್ತಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಹೀಗಾಗಿ, ಅವರು ಯಾವ ವಿಷಯ ಪ್ರಸ್ತಾಪ ಮಾಡುತ್ತಾರೆ ಎಂಬುದನ್ನು ನೋಡಿಕೊಂಡು ಆ ಸಂದರ್ಭದಲ್ಲಿ ಏನು ಮಾಡಬೇಕು ಎಂಬುದನ್ನು ತೀರ್ಮಾನಿಸುತ್ತೇವೆ ಎಂದಿದ್ದಾರೆ.



ಪ್ರತಿಪಕ್ಷಗಳ ಬಳಿ ಅಗತ್ಯ ಸಂಖ್ಯಾಬಲವಿಲ್ಲ ಎಂಬ ವಾಸ್ತವ ಅವರಿಗೂ ಗೊತ್ತಿದೆ. ಗಂಭೀರ ವಿಚಾರಗಳ ಬಗ್ಗೆ ಚರ್ಚೆಗೆ ಕಾಂಗ್ರೆಸ್‌ಗೆ ಮನಸ್ಸಿಲ್ಲ ಎಂಬುದು ಸ್ಪಷ್ಟವಾಗುತ್ತದೆ. ಕಾಂಗ್ರೆಸ್‌ನ ಈ ಪ್ರಯತ್ನಕ್ಕೆ ಹೆಚ್ಚಿನ ಮಹತ್ವ ಬೇಕಾಗಿಲ್ಲ. ಸರ್ಕಾರ ಸುಭದ್ರವಾಗಿದೆ.

• **ಡಾ.ಸಿ.ಎನ್. ಅಶ್ವತ್ಥನಾರಾಯಣ,** ಡಿಸಿಎಂ

### ಇಂದು ಸಂಜೆ ಬಿಜೆಪಿ ಶಾಸಕಾಂಗ ಸಭೆ

ಈ ಬೆಳವಣಿಗೆಗಳ ಮಧ್ಯೆ ಶುಕ್ರವಾರ ಸಂಜೆ ಬಿಜೆಪಿ ಶಾಸಕಾಂಗ ಸಭೆ ನಡೆಯಲಿದೆ. ರಾಜಭವನ ರಸ್ತೆಯಲ್ಲಿರುವ ಕ್ಯಾಪಿಟಲ್ ಹೋಟೆಲ್‌ನಲ್ಲಿ ಸಂಜೆ 7 ಗಂಟೆಗೆ ಶಾಸಕಾಂಗ ಸಭೆ ನಿಗದಿಯಾಗಿದೆ. ಉಪಮುಖ್ಯಮಂತ್ರಿಗಳಾದ ಡಾ.ಸಿ.ಎನ್. ಅಶ್ವತ್ಥನಾರಾಯಣ, ಗೋವಿಂದ ಕಾರಜೋಳ ಸೇರಿದಂತೆ ಒಟ್ಟು ಏಳು ಸಚಿವರು, ಐದಾರು ಶಾಸಕರು ಕೋವಿಡ್‌ಗೆ ಚಿಕಿತ್ಸೆ ಪಡೆಯುತ್ತಿದ್ದು, ಅವರನ್ನು ಹೊರತುಪಡಿಸಿ ಉಳಿದವರು ಪಾಲ್ಗೊಳ್ಳಲಿದ್ದಾರೆ. ಕಾಂಗ್ರೆಸ್‌ನ ಅವಿಶ್ವಾಸ ನಿರ್ಣಯದ ಬಗ್ಗೆಯೂ ಚರ್ಚೆಯಾಗುವ ಸಾಧ್ಯತೆ ಇದೆ.

### ಅವಿಶ್ವಾಸದ ಹಿಂದಿನ ಕೈ ತಂತ್ರ

- ರಾಜ್ಯ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಸದನದಲ್ಲಿ ದಾಖಲಿಸುವುದು
- ಸಾರ್ವಜನಿಕ ವಲಯದಲ್ಲಿ ಸರ್ಕಾರದ ವರ್ಚಸ್ಸಿಗೆ ಧಕ್ಕೆ ತರುವುದು
- ಯಡಿಯೂರಪ್ಪ ಕುಟುಂಬದವರ ಹಸ್ತಕ್ಷೇಪ ನಡೆಯುತ್ತಿದೆ ಎನ್ನುವುದನ್ನು ಬಿಂಬಿಸುವುದು.
- ಸರ್ಕಾರದ ಭ್ರಷ್ಟಾಚಾರ ವಿಷಯವನ್ನೇ ಉಪ ಚುನಾವಣೆ ಅಸ್ತ್ರವನ್ನಾಗಿ ಮಾಡುವುದು.

### ಜೆಡಿಎಸ್ ಬೆಂಬಲವಿಲ್ಲ?

- ಅವಿಶ್ವಾಸ ನಿರ್ಣಯಕ್ಕೆ ಮುನ್ನ ಕಾಂಗ್ರೆಸ್, ಜೆಡಿಎಸ್ ನಾಯಕರ ಸಂಪರ್ಕ ಕೊರತೆ
- ಈ ವಿಷಯ ಜೆಡಿಎಸ್ ನಾಯಕರಿಗೆ ಇರುಸು ಮುರುಸು ಮಾಡಿರಬಹುದು
- ಸದನದಲ್ಲಿಯೂ ಕಾಂಗ್ರೆಸ್ ನಾಯಕರ ಜತೆಯಲ್ಲಿ ಜೆಡಿಎಸ್ ನಿಂತಿಲ್ಲ
- ಬಿಜೆಪಿ ವಿರುದ್ಧವೂ ಜೆಡಿಎಸ್ ಆಕ್ರಮಣಕಾರಿ ಮನೋಭಾವ ಪ್ರದರ್ಶಿಸಿಲ್ಲ